# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | 57(86) |
| **ವಿಧಾನ ಸಭೆ ಸದಸ್ಯರ ಹೆಸರು:** | ಶ್ರೀ ಎಂ ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ:** | 09.12.2024 |
| **ಉತ್ತರಿಸುವ ಸಚಿವರು:** | ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಕೊರತೆ ಇದೆಯೇ; ಹಾಗಿದ್ದಲ್ಲಿ ಎಷ್ಟು ವೈದ್ಯಕೀಯ ಕಾಲೇಜುಗಳಿವೆ; (ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಕೊರತೆ ಇರುತ್ತದೆ. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸುವುದು ಸರ್ಕಾರದ ಉದ್ದೇಶವಾಗಿದ್ದು, ಈ ಹಿನ್ನೆಲೆಯಲ್ಲಿ ಒಟ್ಟಾರೆ 10 ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳ ಕೊರತೆಯಿದೆ. (ದಾವಣಗೆರೆ, ಬೆಂಗಳೂರು ಗ್ರಾಮಾಂತರ, ಕೋಲಾರ, ತುಮಕೂರು, ದಕ್ಷಿಣ ಕನ್ನಡ, ಉಡುಪಿ, ರಾಮನಗರ, ಬಾಗಲಕೋಟೆ, ವಿಜಯಪುರ ಹಾಗೂ ವಿಜಯನಗರ) |
| ಆ) | ರಾಜ್ಯದಲ್ಲಿರುವ ಸರ್ಕಾರಿ ಆಯುಷ್ ವೈದ್ಯಕೀಯ ಕಾಲೇಜುಗಳು ಮತ್ತು ಕಾರ್ಯನಿರ್ವಹಿಸುತ್ತಿರುವ ಆಯುಷ್ ಕ್ಷೇಮ ಕೇಂದ್ರಗಳ ಸಂಖ್ಯೆ ಎಷ್ಟು: (ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿ 02 ಇ.ಎಸ್.ಐ. ಆಸ್ಪತ್ರೆಗಳು ಸೇರಿದಂತೆ ಒಟ್ಟಾರೆ 24 ಸರ್ಕಾರಿ ವೈದ್ಯಕೀಯ ಕಾಲೇಜುಗಳು ಕಾರ್ಯ ನಿರ್ವಹಿಸುತ್ತಿವೆ (ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ).<br>ಮುಂದುವರೆದು, ರಾಜ್ಯದಲ್ಲಿ ಒಟ್ಟು 07 ಸರ್ಕಾರಿ ಆಯುಷ್ ವೈದ್ಯಕೀಯ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.<br>1) 04 ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ (ಬೆಂಗಳೂರು, ಮೈಸೂರು, ಶಿವಮೊಗ್ಗ ಮತ್ತು ಬಳ್ಳಾರಿ)<br>2) 01 ಸರ್ಕಾರಿ ಹೋಮಿಯೋಪತಿ ವೈದ್ಯಕೀಯ ಮಹಾವಿದ್ಯಾಲಯ ಬೆಂಗಳೂರು.<br>3) 01 ಸರ್ಕಾರಿ ಯುನಾನಿ ವೈದ್ಯಕೀಯ ಮಹಾವಿದ್ಯಾಲಯ (ಬೆಂಗಳೂರು)<br>4) 01 ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯ (ಮೈಸೂರು).<br>ಕೇಂದ್ರ ಪುರಸ್ಕೃತ ಯೋಜನೆಯ ರಾಷ್ಟ್ರೀಯ ಆಯುಷ್ ಅಭಿಯಾನದ ಆಯುಷ್ಮಾನ್ ಭಾರತ ಯೋಜನೆಯಡಿಯಲ್ಲಿ ಒಟ್ಟು 376 ಆಯುಷ್ |

| | | |
|---|---|---|
| | | ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. (ಆಯುಷ್ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳನ್ನು ಆಯುಷ್ಮಾನ್ ಆರೋಗ್ಯ ಮಂದಿರ (ಆಯುಷ್) ಎಂದು ಮರುನಾಮಕರಣಗೊಳಿಸಲಾಗಿದೆ).<br><br>ಜಿಲ್ಲಾವಾರು ಮಾಹಿತಿಯನ್ನು ಅನುಬಂಧ - 02ರಲ್ಲಿ ಒದಗಿಸಲಾಗಿದೆ. |
| ಇ) | ಕಳೆದ ಮೂರು ವರ್ಷಗಳಲ್ಲಿ ಇಂತಹ ವೈದ್ಯಕೀಯ ಕಾಲೇಜುಗಳಿಗೆ ಮತ್ತು ಕ್ಷೇಮ ಕೇಂದ್ರಗಳಿಗೆ ಕೇಂದ್ರ ಸರ್ಕಾರವು ಅನುದಾನ ನೀಡುತ್ತಿದೆಯೇ; ನೀಡುತ್ತಿದ್ದಲ್ಲಿ ಕೇಂದ್ರ ಸರ್ಕಾರದ ಅನುದಾನವನ್ನು ರಾಜ್ಯದ ಯಾವ ಯಾವ ಕಾಲೇಜುಗಳಿಗೆ ನೀಡಲಾಗಿದೆ; | ಕಳೆದ ಮೂರು ವರ್ಷಗಳಲ್ಲಿ ಈ ಕೆಳಕಂಡ ವೈದ್ಯಕೀಯ ಕಾಲೇಜುಗಳಿಗೆ ಕೇಂದ್ರ ಸರ್ಕಾರದಿಂದ ಅನುದಾನ ನೀಡಿದೆ:-<br>• ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಯಾದಗಿರಿ<br>• ನಂದಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿಕ್ಕಬಳ್ಳಾಪುರ<br>• ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿಕ್ಕಮಗಳೂರು.<br>• ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾವೇರಿ<br><br>ವೈದ್ಯಕೀಯ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಯಾವುದೇ ಕ್ಷೇಮ ಕೇಂದ್ರಗಳಿಗೆ ಕೇಂದ್ರ ಸರ್ಕಾರವು ಅನುದಾನ ಒದಗಿಸಿರುವುದಿಲ್ಲ. |
| ಈ) | ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಹೊಸ ಆಯುಷ್ ಕಾಲೇಜು ಮತ್ತು ಆಯುಷ್ ಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರವು ಯೋಜಿಸಿದೆಯೇ; ಇದ್ದಲ್ಲಿ ಅದರ (ವಿವರಗಳನ್ನು ಒದಗಿಸುವುದು) | ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಹೊಸ ಆಯುಷ್ ಕಾಲೇಜುಗಳನ್ನು ಸ್ಥಾಪಿಸುವ ಬಗ್ಗೆ ಯಾವುದೇ ಪ್ರಸ್ತಾವನೆಗಳು ಸ್ವೀಕೃತವಾಗಿರುವುದಿಲ್ಲ.<br><br>ಕೇಂದ್ರ ಪುರಸ್ಕೃತ ಯೋಜನೆ ರಾಷ್ಟ್ರೀಯ ಆಯುಷ್ ಅಭಿಯಾನದ ಆಯುಷ್ಮಾನ್ ಭಾರತ ಯೋಜನೆಯಡಿಯಲ್ಲಿ ಆಯುಷ್ಮಾನ್ ಆರೋಗ್ಯ ಮಂದಿರ (ಆಯುಷ್)ಗಳನ್ನು ಮೇಲ್ದರ್ಜೆಗೇರಿಸಲು ಕೇಂದ್ರ ಸರ್ಕಾರವು ರಾಜ್ಯಕ್ಕೆ ನೀಡಿರುವ ಗುರಿಯನ್ನು 2022-23ನೇ ಸಾಲಿನಲ್ಲೇಯೇ ಸಾಧಿಸಿರುವುದರಿಂದ ಹೊಸ ಆಯುಷ್ಮಾನ ಆರೋಗ್ಯ ಮಂದಿರ (ಆಯುಷ್) ಗಳನ್ನು ಸ್ಥಾಪಿಸುವ ಪ್ರಸ್ತಾವನೆ ಇರುವುದಿಲ್ಲ. |

No: MED 369 RI 2024

**(ಡಾ:ಶರಣ ಪ್ರಕಾಶ ಆರ್. ಪಾಟೀಲ)**
ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು

# ಅನುಬಂಧ - 1

| ಕ್ರ.ಸಂ | ಕಾಲೇಜು / ಸಂಸ್ಥೆಗಳ ಹೆಸರು |
|---|---|
| 1 | ಬೆಂಗಳೂರು, ವೈದ್ಯಕೀಯಮಹಾವಿದ್ಯಾಲಯಹಾಗೂಸಂಶೋಧನಾಸಂಸ್ಥೆ, ಬೆಂಗಳೂರು. |
| 2 | ಮೈಸೂರು, ವೈದ್ಯಕೀಯಮಹಾವಿದ್ಯಾಲಯಹಾಗೂಸಂಶೋಧನಾಸಂಸ್ಥೆ, ಮೈಸೂರು. |
| 3 | ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ |
| 4 | ಬಳ್ಳಾರಿ, ವೈದ್ಯಕೀಯಮಹಾವಿದ್ಯಾಲಯಹಾಗೂಸಂಶೋಧನಾಕೇಂದ್ರ, ಬಳ್ಳಾರಿ. |
| 5 | ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ,ಬೀದರ್. |
| 6 | ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು. |
| 7 | ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾವಿ, |
| 8 | ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ. |
| 9 | ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ. |
| 10 | ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ. |
| 11 | ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಾಮರಾಜನಗರ |
| 12 | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ, ಕೊಡಗು. |
| 13 | ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗುಲ್ಬರ್ಗಾ. |
| 14 | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಪ್ಪಳ. |
| 15 | ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ. |
| 16 | ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಾರವಾರ. |
| 17 | ಶ್ರೀ ಅಟಲ್ ಬಿಹಾರಿ ವಾಜಪೇಯಿ ಮಹಾವಿದ್ಯಾಲಯ ಹಾಗೂ ಸಂಶೋಧನಾ ~~ಸಂಸ್ಥೆ, ಬೆಂಗಳೂರು.~~ |
| 18 | ಚಿಕ್ಕಬಳ್ಳಾಪುರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿಕ್ಕಬಳ್ಳಾಪುರ. |
| 19 | ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾವೇರಿ. |
| 20 | ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಯಾದಗಿರಿ. |
| 21 | ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿಕ್ಕಮಗಳೂರು. |
| 22 | ಚಿತ್ರದುರ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿತ್ರದುರ್ಗ. |
| 23 | ESIC ವೈದ್ಯಕೀಯ ಕಾಲೇಜು ಮತ್ತು PGIMSR, ರಾಜಾಜಿನಗರ, ಬೆಂಗಳೂರು. |
| 24 | ESIC ವೈದ್ಯಕೀಯ ಕಾಲೇಜು ಮತ್ತು PGIMSR, ಕಲಬುರಗಿ. |